ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ಸೋಮವಾರ, ದಿನಾಂಕ: 23ನೇ ಮಾರ್ಚ್, 2020

ಕಾಡಾನೆ ಕಾರಿಡಾರ್‌ನಲ್ಲಿ ಆಗುವ ಅವಘಡಗಳ ಕುರಿತು

ಡಾ|| ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :-

1486 (1756) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ 03 ವರ್ಷಗಳಿಂದ ರಾಜ್ಯದಲ್ಲಿ ಎಷ್ಟು ಜನ ಕಾಡಾನೆ ಹಾವಳಿಯಿಂದ ಮೃತಪಟ್ಟಿದ್ದಾರೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಕಾಡಾನೆ ಬರುವ ಕಾರಿಡಾರಿನಲ್ಲಿ ಕಬ್ಬು/ತರಕಾರಿ, ಬಾಳೆಗಿಡ ಹಾಕುವ ರೈತರಿಗೆ ಜಾಗೃತಿ ಮೂಡಿಸುವ ಹಾಗೂ ಪರ್ಯಾಯ ಸ್ಥಳಗಳ ಬಗ್ಗೆ ಸರ್ಕಾರ ಕ್ರಮ ತೆಗೆದುಕೊಂಡಿದೆಯೇ ; (ವಿವರ ನೀಡುವುದು)

(ಇ) ಮೃತರ ಕುಟುಂಬಕ್ಕೆ ಸರ್ಕಾರದಿಂದ ಎಷ್ಟು ಹಣ ಪರಿಹಾರ ನೀಡಲಾಗಿದೆ; ಬಾಕಿ ಇರುವವರಿಗೆ ಯಾವಾಗ ಪರಿಹಾರ ನೀಡಲಾಗುವುದು; ಪರಿಹಾರ ನೀಡಲು ವಿಳಂಬವಾಗಲು ಕಾರಣವೇನು ; (ವಿವರ ನೀಡುವುದು)

(ಈ) ಕಾಡಾನೆ ಹಾವಳಿ ತಡೆಯಲು ಸರ್ಕಾರ ತೆಗೆದುಕೊಂಡ ಕ್ರಮವೇನು; ಇದಕ್ಕಾಗಿ, ಮೀಸಲಿಟ್ಟ ಅನುದಾನವೆಷ್ಟು ? (ಜಿಲ್ಲಾವಾರು ವಿವರ ನೀಡುವುದು)